The Jamkhandi Urban Co-operative Bank Ltd. Jamkhandi

# ದಿ ಜಮಖಂಡಿ ಅರ್ಬನ್ ಕೋ-ಆಪರೇಟಿವ್ಹ್ ಬ್ಯಾಂಕ ಲಿಮಿಟೆಡ್., ಜಮಖಂಡಿ

ನೂತನ ಪ್ರಧಾನ ಕಛೇರಿ, ಎ.ಪಿ.ಎಮ್.ಸಿ ಯಾರ್ಡ್, ಗಿರೀಶ ನಗರ, ಜಮಖಂಡಿ-587301, ಜಿ॥ ಬಾಗಲಕೋಟೆ.

**ಉಲ್ಲೇಖ ಸಂಖ್ಯೆ : ಆಡಳಿತ/ಸಿಬ್ಬಂದಿ/ನೇಮಕಾತಿ/1470/2025-26** **ದಿನಾಂಕ : 26/08/2025**

## ನೇಮಕಾತಿ ಪ್ರಕಟಣೆ

| ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ |
|---|---|---|
| 28/08/2025 | | 27/09/2025 |

ಮಾನ್ಯ ನಿಬಂಧಕರು ಸಹಕಾರ ಸಂಘಗಳು ಬೆಂಗಳೂರ ಇವರ ಆದೇಶ ಸಂಖ್ಯೆ: ಆರ್‌ಸಿಎಸ್/ಯುಬಿಸಿ-7/08/ಯುಸಿಎಸ್/2025-26 ದಿನಾಂಕ 05/07/2025 ಮತ್ತು ಮಾರ್ಪಾಡು ಆದೇಶ ಸಂಖ್ಯೆ: ಆರ್‌ಸಿಎಸ್/ಯುಬಿಸಿ-7/ /ಯುಸಿಎಸ್/2025-26 ದಿನಾಂಕ 22/07/2025 ಹಾಗೂ ಮಾರ್ಪಾಡು ಆದೇಶ ಸಂಖ್ಯೆ: ಆರ್‌ಸಿಎಸ್/ಯುಬಿಸಿ-7/08/ಯುಸಿಎಸ್/2024-25 ದಿನಾಂಕ 24/08/2025 ರಡಿಗಳಲ್ಲಿ ಹೊರಡಿಸಿದ ಆದೇಶಗಳ ಮೇರೆಗೆ ದಿ ಜಮಖಂಡಿ ಅರ್ಬನ್ ಕೋ-ಆಪರೇಟಿವ್ಹ್ ಬ್ಯಾಂಕ ಲಿಮಿಟೆಡ್., ಜಮಖಂಡಿ ಇದರಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಛೆಯುಳ್ಳ ಅಭ್ಯರ್ಥಿಗಳು ಆನ್‌ಲೈನ್ (ಜಾಲತಾಣ) ಮುಖಾಂತರ ಬ್ಯಾಂಕಿನ www.thejamkhandiurbanbank.com ವೆಬ್‌ಸೈಟ್‌ಕ್ಕೆ ಅಪ್‌ಲೋಡ ಮಾಡಿ ಅರ್ಜಿ ಸಲ್ಲಿಸತಕ್ಕದ್ದು. **ಅರ್ಜಿ ಸಲ್ಲಿಸಲು ದಿನಾಂಕ : 28/08/2025 ರಿಂದ 27/09/2025 ರ ವರೆಗೆ ಸಾಯಂಕಾಲ 5.00 ಘಂಟೆಯವರೆಗೆ ಅವಕಾಶ ಇರುತ್ತದೆ.** ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ನೇರ ನೇಮಕಾತಿಗೆ ಹೊರಡಿಸಲಾಗಿರುವ ಹುದ್ದೆಗಳ ವಿವರ ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ವೇತನ ಶ್ರೇಣಿ |
|---|---|---|---|
| 1. | ಕಿರಿಯ ಸಹಾಯಕರು | 14 | 33450-62600 |
| 2. | ಗಣಕಯಂತ್ರ ನಿರ್ವಾಹಕರು | 04 | 33450-62600 |
| 3. | ಸಿಪಾಯಿ | 16 | 21400-42000 |
| 4. | ರಾತ್ರಿ ಕಾವಲುಗಾರರು | 08 | 21400-42000 |
| 5. | ವಾಹನ ಚಾಲಕರು | 02 | 21400-42000 |
| 6. | ಗನ್ ಮ್ಯಾನ್ | 01 | 21400-42000 |
| | ಒಟ್ಟು | 45 | |

1) **ವಿದ್ಯಾರ್ಹತೆ :**

| ಕ್ರ.ಸಂ | ಹುದ್ದೆಗಳ ವಿವರ | ಕನಿಷ್ಠ ಅರ್ಹತೆ |
|---|---|---|
| 1. | ಕಿರಿಯ ಸಹಾಯಕರು | i) ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾಗಿರಬೇಕು.<br>ii) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು; ಮತ್ತು<br>iii) ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ ಜ್ಞಾನವಿರಬೇಕು.<br>**ಆದ್ಯತೆ :** ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿಯನ್ನು ಹೊಂದಿದ ಹಾಗೂ ಅನುಭವ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವದು. |
| 2. | ಗಣಕಯಂತ್ರ ನಿರ್ವಾಹಕರು | i) ದ್ವಿತೀಯ ಪಿ.ಯು.ಸಿ ಯಲ್ಲಿ ಅಥವಾ ಮೂರು ವರ್ಷದ ಡಿಪ್ಲೊಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಉತ್ತೀರ್ಣರಾಗಿರಬೇಕು. |

For, THE JAMKHANDI URBAN CO-OP
BANK LTD., JAMKHANDI.

GENERAL MANAGER

| | | |
|---|---|---|
| | | ii) ಸೀನಿಯರ್ ಕನ್ನಡ/ಇಂಗ್ಲೀಷ ಟೈಪ್‌ರೈಟಿಂಗ್‌ನಲ್ಲಿ ಉತ್ತೀರ್ಣರಾಗಿದ್ದು ಅಥವಾ ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ ಜ್ಞಾನವಿರಬೇಕು; ಮತ್ತು<br>iii) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು.<br>**ಆದ್ಯತೆ :** ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಯಾವುದೇ ತಾಂತ್ರಿಕ ವಿಶ್ವವಿದ್ಯಾನಿಲಯದಿಂದ ಬ್ಯಾಚುಲರ್ ಆಫ್ ಇಂಜಿನೀಯರಿಂಗ್ Computer Science/ Information Science/ Electronic and Communication ಪದವಿಯನ್ನು ಹೊಂದಿದ ಹಾಗೂ ಅನುಭವ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವದು. |
| 3. | ಸಿಪಾಯಿ | i) ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿದ್ದು, ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು. |
| 4. | ರಾತ್ರಿ ಕಾವಲುಗಾರ | i) ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿದ್ದು, ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.<br>**ಆದ್ಯತೆ : ಮಾಜಿ ಸೈನಿಕರಿಗೆ ಆದ್ಯತೆ ನೀಡಲಾಗುವದು.** |
| 5. | ವಾಹನ ಚಾಲಕ | i) ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿದ್ದು, ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.<br>ii) ಕಾನೂನುಬದ್ಧ ಲಘು ವಾಹನ ಹಾಗೂ ಭಾರಿ ವಾಹನ ಚಾಲನೆ ಪರವಾನಿಗೆಯೊಂದಿಗೆ 5 ವರ್ಷದ ಅನುಭವ ಹೊಂದಿರಬೇಕು. |
| 6. | ಗನ್ ಮ್ಯಾನ್ | i) ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿದ್ದು, ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.<br>**ಆದ್ಯತೆ : ಮಾಜಿ ಸೈನಿಕರಿಗೆ ಆದ್ಯತೆ ನೀಡಲಾಗುವದು.** |

**2) ವಯೋಮಿತಿ :**

ಅಭ್ಯರ್ಥಿಗೆ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಕನಿಷ್ಠ 18 ವರ್ಷಗಳಾಗಿರಬೇಕು ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ರೀತ್ಯಾ ಈ ಕೆಳಕಂಡ ಗರಿಷ್ಠ ವಯೋಮಿತಿಗೊಳಪಟ್ಟಿರಬೇಕು.

| ಕ್ರ.ಸಂ | ವಿವರ | ಗರಿಷ್ಠ ವಯೋಮಿತಿ |
|---|---|---|
| i) | ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳಿಗೆ ಅಥವಾ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ಕ್ಕೆ ಸೇರಿರುವ ಅಭ್ಯರ್ಥಿಗಳಿಗೆ | 40 ವರ್ಷ |
| ii) | ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ<br>ವಿವರಣೆ :- ಈ ಕಂಡ (ii) ರ ಉದ್ದೇಶಕ್ಕಾಗಿ ಇತರೆ ಹಿಂದುಳಿದ ವರ್ಗ ಎಂದರೆ, ನೇಮಕಾತಿ ಉದ್ದೇಶಕ್ಕಾಗಿ 2-ಎ, 2-ಬಿ, 3-ಎ ಮತ್ತು 3-ಬಿ ಯಾಗಿ ವರ್ಗೀಕರಿಸಲಾಗಿರುವ ಪರಿಶಿಷ್ಟ ಜಾತಿಗಳು ಅಥವಾ ಪರಿಶಿಷ್ಟ ಪಂಗಡ ಅಥವಾ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ನ್ನು ಹೊರತುಪಡಿಸಿದ ಅಭ್ಯರ್ಥಿಗಳು. | 38 ವರ್ಷ |
| iii) | ಸಾಮಾನ್ಯ ವರ್ಗದವರಿಗೆ | 35 ವರ್ಷ |
| iv) | ಮಾಜಿ ಸೈನಿಕ ಅಭ್ಯರ್ಥಿಗೆ ಕನಿಷ್ಠ 15 ವರ್ಷ ಸೇನೆಯಲ್ಲಿ ಸೇವೆ ಸಲ್ಲಿಸಿರಬೇಕು. | 45 ವರ್ಷ |

**3) ಅರ್ಜಿ ಶುಲ್ಕ :**

| ಕ್ರ.ಸಂ | ಹುದ್ದೆಗಳ ವಿವರ | ಕನಿಷ್ಠ ಅರ್ಹತೆ |
|---|---|---|
| i) | ಕಿರಿಯ ಸಹಾಯಕರು ಹಾಗೂ ಗಣಕಯಂತ್ರ ನಿರ್ವಾಹಕರಿಗೆ | ಹಿಂದುಳಿದ ವರ್ಗ 2-ಎ, 2-ಬಿ, 3-ಎ ಹಾಗೂ 3-ಬಿ ಮತ್ತು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ರೂ.2,000/- (ರೂ. ಎರಡು ಸಾವಿರ ಮಾತ್ರ) + ಜಿಎಸ್‌ಟಿ 18%.<br>ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳಿಗೆ ಅಥವಾ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ಕ್ಕೆ ಸೇರಿರುವ ಅಭ್ಯರ್ಥಿಗಳಿಗೆ ರೂ.1,000/- ( ರೂ. ಒಂದು ಸಾವಿರ ಮಾತ್ರ) + ಜಿಎಸ್‌ಟಿ 18%. |
| ii) | ಸಿಪಾಯಿ, ರಾತ್ರಿಕಾವಲುಗಾರರು, | ಹಿಂದುಳಿದ ವರ್ಗ 2-ಎ, 2-ಬಿ, 3-ಎ ಹಾಗೂ 3-ಬಿ ಮತ್ತು ಸಾಮಾನ್ಯ |



For, THE JAMKHANDI URBAN CO-OP BANK LTD., JAMKHANDI.

GENERAL MANAGER

| | | |
|---|---|---|
| | ವಾಹನ ಚಾಲಕ ಹಾಗೂ ಗನ್ ಮ್ಯಾನ ಹುದ್ದೆಗಳಿಗೆ | ವರ್ಗದ ಅಭ್ಯರ್ಥಿಗಳಿಗೆ ರೂ.1,000/- (ರೂ. ಒಂದು ಸಾವಿರ ಮಾತ್ರ) + ಜಿಎಸ್‌ಟಿ 18%.<br>ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳಿಗೆ ಅಥವಾ ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-1 ಕ್ಕೆ ಸೇರಿರುವ ಅಭ್ಯರ್ಥಿಗಳಿಗೆ ರೂ.500/- ( ರೂ. ಐದು ನೂರು ಮಾತ್ರ) + ಜಿಎಸ್‌ಟಿ 18%. |

**ಸೂಚನೆಗಳು :**

ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳಿಗೆ ಪ್ರವೇಶ ಪತ್ರ ಹಾಗೂ ಲಿಖಿತ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವದು. ಅರ್ಹ ಅಭ್ಯರ್ಥಿಗಳ ಲಿಖಿತ ಪರೀಕ್ಷೆಯ ಪ್ರವೇಶ ಪತ್ರ ( Hall Ticket ) ಗಳನ್ನು ಅಧಿಕೃತ ವೆಬ್‌ಸೈಟ್ www.thejamkhandiurbanbank.com ದಿಂದ ಡೌನಲೋಡ್ ಮಾಡಿಕೊಂಡು ಲಿಖಿತ ಪರೀಕ್ಷೆಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಹಾಜರಪಡಿಸತಕ್ಕದ್ದು. ಲಿಖಿತ ಪರೀಕ್ಷೆಗೆ/ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಿಂದಲೇ ಹಾಜರಾಗತಕ್ಕದ್ದು.

i) ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಹೊಂದಿರಬೇಕು.
<u>ವಿ.ಸೂ :</u> ಕಿರಿಯ ಸಹಾಯಕ ಹಾಗೂ ಗಣಕಯಂತ್ರ ನಿರ್ವಾಹಕರ ಹುದ್ದೆಗಳಿಗೆ ನೀಡಲಾಗುವ ಆದ್ಯತೆಗೆ ಸಂಬಂಧಿಸಿದ ಪದವಿಯ ಎಲ್ಲಾ ಸೆಮಿಸ್ಟರ್‌ಗಳ/ವರ್ಷಾವಾರುಗಳ ಅಂಕಪಟ್ಟಿಗಳನ್ನು ಪ್ರತ್ಯೇಕವಾಗಿ ಅಪ್ಲೋಡ್ ಮಾಡಬೇಕು.

ii) ಅಭ್ಯರ್ಥಿಯು ಭಾರತೀಯ ನಾಗರಿಕನಾಗಿರತಕ್ಕದ್ದು.

iii) ಸ್ಪಷ್ಟವಾಗಿ ಕಾಣಿಸದೇ ಇರುವ ಯಾವುದೇ ದಾಖಲೆಗಳನ್ನು ಅಪ್ಲೋಡ್ ಮಾಡಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಕಾರಣ ನೀಡದೆ ತಿರಸ್ಕರಿಸಲಾಗುವದು.

iv) ಈ ಪ್ರಕಟಣೆಯಲ್ಲಿ ಪ್ರಕಟಿಸಲಾಗಿರುವ ಹುದ್ದೆಗಳ ಸಂಖ್ಯೆಯಲ್ಲಿ ಬದಲಾವಣೆ (ಹೆಚ್ಚು/ಕಡಿಮೆ) ಮಾಡುವ ಹಕ್ಕನ್ನು ಬ್ಯಾಂಕಿನ ನೇಮಕಾತಿ ಪ್ರಾಧಿಕಾರವು ಹೊಂದಿರುತ್ತದೆ.

v) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡಲು ಆನ್‌ಲೈನ್ ನಲ್ಲಿ ನೀಡಿರುವ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

vi) ಸ್ಪಷ್ಟ ಮಾಹಿತಿಗಳನ್ನು ನೀಡದೆ ಹಾಗೂ ತಪ್ಪು ಮಾಹಿತಿಗಳನ್ನು ಸಲ್ಲಿಸಿದಲ್ಲಿ ಅಂತವರ ಅರ್ಜಿಯನ್ನು ಯಾವುದೇ ನೋಟಿಸ್ಸು ನೀಡದೆ ತಿರಸ್ಕರಿಸಲಾಗುವದು.

vii) ಅರ್ಜಿಯ ಶುಲ್ಕವನ್ನು ಪಾವತಿಸುವದಕ್ಕೆ ಡೆಬಿಟ್ ಕಾರ್ಡ/ಕ್ರೆಡಿಟ್ ಕಾರ್ಡ/ಆನ್‌ಲೈನ್/ಯುಪಿಆಯ್ ಮೂಲಕ ನಿಗದಿತ ಶುಲ್ಕ ಪಾವತಿ ಮಾಡತಕ್ಕದ್ದು.

viii) ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ix) ಬ್ಯಾಂಕಿನ ಈ ನೇಮಕಾತಿ ಪ್ರಕಟಣೆಯಲ್ಲಿರುವ ಸೂಚನೆಗಳನ್ನು ಪೂರ್ಣವಾಗಿ ತಿಳಿಯದೆ ಅಭ್ಯರ್ಥಿಗಳು ತಪ್ಪು ಎಸಗಿದಲ್ಲಿ ಬ್ಯಾಂಕು ಜವಾಬ್ದಾರರಾಗಿರುವುದಿಲ್ಲ.

x) ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಸ್ಪಷ್ಟೀಕರಣ ಪ್ರಶ್ನೋತ್ತರಗಳು, ತಕರಾರು ಇತ್ಯಾದಿಗಳಿಗೆ ಪತ್ರ/ಇ-ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶವಿರುವುದಿಲ್ಲ.

xi) ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ, ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು.

xii) ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಶುಲ್ಕವನ್ನು ಸಂದಾಯ ಮಾಡಿದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವದು. **ಡಿಡಿ/ಚೆಕ್ಕ/ಪೋಸ್ಟಲ್ ಆರ್ಡರ್/ಮನಿ ಆರ್ಡರ್/ನಗದು** ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

xiii) ತಪ್ಪು ಮಾಹಿತಿ ನೀಡಿ ಅರ್ಜಿಯನ್ನು ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಬ್ಯಾಂಕು ಕಾನೂನಿನನ್ವಯ ಸೂಕ್ತ ಕ್ರಮ ಕೈಕೊಳ್ಳಲಾಗುವದು.

xiv) **ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 27/09/2025 ರಂದು ಸಾಯಂಕಾಲ 5.00 ಘಂಟೆಯವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.**

xv) ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದುರುಗಿಸಲಾಗುವುದಿಲ್ಲ ಅಥವಾ ಇತರೇ ಯಾವುದೇ ನೇಮಕಾತಿಗೆ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.

xvi) ಅರ್ಜಿಗಳನ್ನು ಭರ್ತಿ ಮಾಡಲು ಹಾಗೂ ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಸಾರ್ವಜನಿಕ ರಜೆ ಇದ್ದರು ಕೂಡಾ ಶುಲ್ಕ ಪಾವತಿಸಲು ಕೊನೆಯ ದಿನಾಂಕವಾಗಿರುತ್ತದೆ.

xvii) ಆನ್‌ಲೈನ್ (Online ) ಅರ್ಜಿಗಳನ್ನು ಹೊರತುಪಡಿಸಿ ಬೇರೆ ಯಾವುದೇ ರೀತಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.



For, THE JAMKHANDI URBAN CO-OP BANK LTD., JAMKHANDI.

GENERAL MANAGER

The Jamkhandi Urban Co-operative Bank Ltd. Jamkhandi

xviii) ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್ಲೋಡ್ ಮಾಡಬೇಕಾದ ಪ್ರಮಾಣಪತ್ರ ದಾಖಲಾತಿಗಳನ್ನು ಸ್ಪಷ್ಟವಾಗಿ ಕಾಣುವಂತೆ ಮತ್ತು ಓದಲು ಸಾಧ್ಯವಾಗುವಂತೆ ಸ್ಕ್ಯಾನ್ ಮಾಡಿ ಅಪ್ಲೋಡ್ ಮಾಡತಕ್ಕದ್ದು.

xix) ಈ ಪ್ರಕಟಣೆಯಲ್ಲಿ ತಿಳಿಸಿದಂತೆ ಕಿರಿಯ ಸಹಾಯಕರು ಹಾಗೂ ಗಣಕಯಂತ್ರ ನಿರ್ವಾಹಕರ ಹುದ್ದೆಗಳಿಗೆ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಯ ಜೊತೆಗೆ ಆದ್ಯತೆ ನೀಡಲಾಗಿರುವ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್‌ಗಳ/ವರ್ಷಾವಾರುಗಳ ಕ್ರೋಢಿಕೃತ ಅಂಕ ಪಟ್ಟಿಗಳನ್ನು ಪರಿಗಣಿಸಲಾಗುವುದು.

ಸಿಪಾಯಿ, ರಾತ್ರಿಕಾವಲುಗಾರ, ವಾಹನ ಚಾಲಕ ಹಾಗೂ ಗನ್ ಮ್ಯಾನ್ ಹುದ್ದೆಗಳಿಗೆ ನಿಗದಿಪಡಿಸುವ ಕನಿಷ್ಠ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೇ ಯಾವುದೇ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.

xx) ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆ ಪಡೆದ ನಂತರ ಆಯಾ ಹುದ್ದೆಗೆ ಸಂಬಂಧಪಟ್ಟ ಸೇವಾ ಅನುಭವದ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಆನ್‌ಲೈನ್ ನಲ್ಲಿ ಅಪ್ಲೋಡ್ ಮಾಡುವದು.

xxi) ಬ್ಯಾಂಕು ಅಭ್ಯರ್ಥಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸುವುದಿಲ್ಲ.

xxii) **ಸಿಬ್ಬಂದಿ ನೇಮಕಾತಿ ಪ್ರಕಟಣೆ ಸಂಖ್ಯೆ: ಆಡಳಿತ/ಸಿಬ್ಬಂದಿ/ನೇಮಕಾತಿ/83/5701/2022–23 ದಿನಾಂಕ 27/01/2023 ರಂದು 06 ಸಿಪಾಯಿ ಹಾಗೂ 3 ರಾತ್ರಿಕಾವಲುಗಾರರ ಹುದ್ದೆಗಳ ನೇಮಕಾತಿಗಾಗಿ ಅರ್ಜಿಗಳನ್ನು ಆವ್ಹಾನಿಸಿದಾಗ ಯಾವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಿರುತ್ತೀರಿ ಅಂತಹ ಅಭ್ಯರ್ಥಿಗಳು ಕೂಡಾ ಪುನಃ ಅರ್ಜಿಗಳನ್ನು ಸಲ್ಲಿಸಬೇಕು. ಈ ಹಿಂದೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ವಯೋಮಿತಿಯು ದಿನಾಂಕ 27/09/2025 ರಂದು ಮೀರಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಲಿಕೆ ನೀಡಲಾಗುವದು.**

xxiii) ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ/ ರದ್ದುಪಡಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.

xxiv) ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಮೂಲ ಅಂಕ ಪಟ್ಟಿಯಲ್ಲಿರುವ ಅಂಕಗಳನ್ನು ಪರಿಗಣಿಸಲಾಗುವದು.

xxv) ಅನುಭವ ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆಯನ್ನು ಪಡೆದ ನಂತರ ಹೊಂದಿರುವ ಆಯಾ ಕ್ಷೇತ್ರ/ಹುದ್ದೆಗೆ ಸಂಬಂಧಪಟ್ಟ ನಿರ್ದಿಷ್ಠ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವದ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸ್ವಯಂ ದೃಢೀಕರಣದ ಸೇವಾ ಪತ್ರವನ್ನು ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ ಅಪ್ಲೋಡ್ ಮಾಡಬೇಕು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

xxvi) ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ವಿಶ್ವವಿದ್ಯಾನಿಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

xxvii) ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ **ಸಹಾಯವಾಣಿ** ನಂ.8861751321 ನ್ನು ಸಂಪರ್ಕಿಸಿ ಅಗತ್ಯ ಮಾಹಿತಿಗಳನ್ನು ಪಡೆಯಬಹುದು. **ದಿನಾಂಕ 28/08/2025 ರಿಂದ 27/09/2025 ರವರೆಗೆ ಸಮಯ : ಬೆಳಿಗ್ಗೆ 11.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ.**

**4) <u>ಆಯ್ಕೆ ವಿಧಾನ :</u>**

**<u>ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ ಆಯ್ಕೆ ವಿಧಾನ :</u>**

ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಗಳನ್ನು ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಹಾಗೂ ಅಗತ್ಯ ದಾಖಲೆಗಳ ಆಧಾರದ ಮೇಲೆ ಅರ್ಜಿಗಳನ್ನು ಪರಿಗಣಿಸಿ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ವಿಷಯಗಳ ಹುದ್ದೆವಾರು ವಿವರ ಈ ಕೆಳಗಿನಂತೆ ಇರುತ್ತವೆ.

**i) <u>ಕಿರಿಯ ಸಹಾಯಕರು/ಗಣಕಯಂತ್ರ ನಿರ್ವಾಹಕರ ಹುದ್ದೆಗಳಿಗೆ :</u>**

200 ಅಂಕಗಳ ಲಿಖಿತ ಪರೀಕ್ಷೆ ಇದ್ದು, ಕನ್ನಡ ಭಾಷೆಗಾಗಿ 50, ಸಾಮಾನ್ಯ ಇಂಗ್ಲೀಷಗಾಗಿ 25, ಸಾಮಾನ್ಯ ಜ್ಞಾನಕ್ಕಾಗಿ 25, ಸಹಕಾರಿ ವಿಷಯಗಳಿಗಾಗಿ 50, ಭಾರತದ ಸಂವಿಧಾನಕ್ಕಾಗಿ 25 ಹಾಗೂ ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯ ವಸ್ತುಗಳಿಗೆ 25 ಅಂಕಗಳನ್ನು ಒಳಗೊಂಡಿರುತ್ತದೆ.

ಕಿರಿಯ ಸಹಾಯಕರ ಹಾಗೂ ಗಣಕಯಂತ್ರ ನಿರ್ವಾಹಕರ ಹುದ್ದೆಗಳ ಲಿಖಿತ ಪರೀಕ್ಷೆಯಾದ ನಂತರ ಸಂದರ್ಶನಕ್ಕೆ ಆಯ್ಕೆಯಾದ 1:5 ಅಭ್ಯರ್ಥಿಗಳಿಗೆ, ಗಣಕಯಂತ್ರ ನಿರ್ವಹಣೆಯ ಪ್ರಾಯೋಗಿಕ ( Computer Practical Test ) ಪರೀಕ್ಷೆ ಕೈಕೊಳ್ಳಲಾಗುವದು.

For, THE JAMKHANDI URBAN CO-OP BANK LTD., JAMKHANDI.

GENERAL MANAGER

ii) **ಸಿಪಾಯಿ/ರಾತ್ರಿಕಾವಲುಗಾರರು/ವಾಹನ ಚಾಲಕ/ಗನ್ ಮ್ಯಾನ್ :**

100 ಅಂಕಗಳ ಲಿಖಿತ ಪರೀಕ್ಷೆ ಇದ್ದು, ಕನ್ನಡ ಭಾಷೆಗಾಗಿ-50 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 50 ಅಂಕಗಳನ್ನು ಒಳಗೊಂಡಿರುತ್ತವೆ. ಸಂದರ್ಶನ ವೇಳೆಯಲ್ಲಿ ವಾಹನ ಚಾಲಕರಿಗೆ ವಾಹನ ಚಾಲನೆಯ ಪರೀಕ್ಷೆ ನಡೆಸಲಾಗುವದು.

ಈ ಮೇಲಿನ ಎಲ್ಲಾ ಹುದ್ದೆಗಳಿಗೆ ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳ ಆಧಾರದ ಮೇಲೆ 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ 85 ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳ ಜೊತೆಗೆ ಮೌಖಿಕ ಸಂದರ್ಶನಕ್ಕೆ ಗರಿಷ್ಠ 15 ಅಂಕಗಳನ್ನು ನಿಗದಿಪಡಿಸಿದ್ದು, ಸಂದರ್ಶನದಲ್ಲಿ ಗಳಿಸುವ ಅಂಕಗಳನ್ನು ಮತ್ತು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಒಟ್ಟುಗೂಡಿಸಿ, ಈ ಆಧಾರದ ಮೇಲೆ ಯಶಸ್ವಿ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ತಯಾರಿಸಿ ಅರ್ಹತೆಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅಭ್ಯರ್ಥಿಗಳ ಅರ್ಹತೆಯ ಬಗ್ಗೆ ಬ್ಯಾಂಕಿನ ಆಡಳಿತ ಮಂಡಳಿಯ ನಿರ್ಣಯವೇ ಅಂತಿಮ ನಿರ್ಣಯವಾಗಿರುತ್ತದೆ.

5) **ಜಾತಿ ಪ್ರಮಾಣ ಪತ್ರ :**

ಜಾತಿ ಅನುಸಾರ ವಯೋಮಿತಿ ಬಯಸುವ ಅಭ್ಯರ್ಥಿಗಳು ಈ ಕೆಳಗಿನಂತೆ ಜಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಚಾಲ್ತಿಯಲ್ಲಿರತಕ್ಕದ್ದು ಅಂತಹ ದಾಖಲೆಗಳನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು.

i) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಪ್ರವರ್ಗ-1 ಸೌಲಭ್ಯ ಪಡೆಯಲು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.

ii) ಪ್ರ ವರ್ಗ-2ಎ, 2ಬಿ, 3ಎ ಮತ್ತು 3 ಬಿ ವರ್ಗದ ಸೌಲಭ್ಯ ಪಡೆಯಲು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.

6) **ಮಾಜಿ ಸೈನಿಕ ಅಭ್ಯರ್ಥಿ :**

ಮಾಜಿ ಸೈನಿಕ ಅಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂ-ದಳ, ನೌಕಾದಳ ಮತ್ತು ವಾಯು-ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ, ಸರ್ಕಾರದ ಜಾರಿಯಲ್ಲಿರುವ ನಿಯಮಗಳನ್ವಯ ದೃಢೀಕರಿಸಿದ ಮಾಜಿ ಸೈನಿಕ ಪ್ರಮಾಣ ಪತ್ರ.

i) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ವ್ಯಕ್ತಿ.

ii) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಗೆ ಅನರ್ಹನಾದವ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.

iii) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

iv) ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆದಿರುವ ವ್ಯಕ್ತಿ.

v) ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿ

- ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ವ್ಯಕ್ತಿ
- ಮಿಲಿಟರಿ ಸೇವೆಯಿಂದ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿದ ವ್ಯಕ್ತಿ
- ಗ್ರಾಚ್ಯುಟಿ ಪ್ರಶಸ್ತಿ ವಿಜೇತರು

**ವಿವರಣೆ :**

ಎ) ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ, ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದರೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಬ್ಯಾಂಕಿನ ಹುದ್ದೆಗೆ ನೇಮಕ ಹೊಂದುವಂತಿಲ್ಲ.

ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಪತ್ನಿ, ಅಥವಾ ಪತಿ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿ ಪಡೆಯಲು ಅರ್ಹರಿರುತ್ತಾರೆ. ಆದರೆ ಅಂತಹವರುಗಳು ವಯೋಮಿತಿ ಸಡಲಿಕೆಯನ್ನು ಪಡೆಯಲು ಅರ್ಹರಿರುವುದಿಲ್ಲ.

For, THE JAMKHANDI URBAN CO-OP BANK LTD., JAMKHANDI.

GENERAL MANAGER

The Jamkhandi Urban Co-operative Bank Ltd. Jamkhandi

**7) ಶೈಕ್ಷಣಿಕ ವಿದ್ಯಾರ್ಹತೆ :**

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ಹುದ್ದೆಗಳಿಗೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ಯಾವುದೇ ಹುದ್ದೆಗೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ ಹಾಗೂ ಸೇವಾನುಭವವನ್ನು ನಿಗದಿಪಡಿಸಿದಾಗ ಅಭ್ಯರ್ಥಿಗಳು ವಿದ್ಯಾರ್ಹತೆ ಹೊಂದಿದ ನಂತರ ಆ ಸೇವಾನುಭವ ಹೊಂದಿರತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್‌ಗಳ/ವರ್ಷಾವಾರು ನಿಗದಿಪಡಿಸಿರುವ ಗರಿಷ್ಠ ಮತ್ತು ಪಡೆದಿರುವ ಅಂಕಗಳನ್ನು ಕ್ರೋಢಿಕರಿಸಿ ಸರಾಸರಿ ಅಂಕಗಳನ್ನು ಸ್ಪಷ್ಟವಾಗಿ ನಮೂದಿಸುವುದು.

ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾನಿಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡಾವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು.

**8) ಕಡ್ಡಾಯವಾಗಿ ಹಾಜರ ಪಡಿಸಬೇಕಾದ ದೃಢೀಕರಣ ಪ್ರಮಾಣ ಪತ್ರಗಳು :**

ಅರ್ಜಿಯ ಜೊತೆ ಸಂಬಂಧಿಸಿದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಆನ್‌ಲೈನ್‌ದಲ್ಲಿ ತಪ್ಪದೇ ಸ್ವ ಹಸ್ತಾಕ್ಷರದಿಂದ ದೃಢೀಕರಿಸಿ ಅಪ್ಲೋಡ್ ಮಾಡುವದು ಹಾಗೂ ಮೌಖಿಕ ಸಂದರ್ಶನಕ್ಕೆ ಅರ್ಹರಾದಲ್ಲಿ ಸದರಿ ಮೂಲ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಹಾಜರ ಪಡಿಸುವದು.

- i) ಪಾಸ ಪೋರ್ಟ ಅಳತೆಯ ಭಾವಚಿತ್ರ.
- ii) ಅಭ್ಯರ್ಥಿಯ ಮಾದರಿ ಸಹಿಯನ್ನು ಪ್ರತ್ಯೇಕವಾಗಿ ಸ್ಕ್ಯಾನ್ ಮಾಡಿ ಅಪ್ಲೋಡ್ ಮಾಡಬೇಕು.
- iii) ವಿವಿಧ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಪ್ರಮಾಣ ಪತ್ರಗಳ ಅಂಕ ಪಟ್ಟಿಗಳು.
- iv) ವಯಸ್ಸಿನ ದೃಢೀಕರಣ ಕುರಿತು ಎಸ್.ಎಸ್.ಎಲ್.ಸಿ ಅಂಕ ಪಟ್ಟಿ/ವರ್ಗಾವಣೆ ಪ್ರಮಾಣ ಪತ್ರ.
- v) ವಯೋಮಿಸಲಾತಿಯನ್ನು ಕೋರಿದಲ್ಲಿ ಸಕ್ಷಮ್ ಪ್ರಾಧಿಕಾರ ನೀಡುವ ಜಾತಿ ಪ್ರಮಾಣ ಪತ್ರ.
- vi) ಸೇವಾ ಅನುಭವ ಪ್ರಮಾಣ ಪತ್ರ.

**9) ವಯೋಮಿತಿ ವಿನಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :**

- i) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ವಯೋಮಿತಿ ವಿನಾಯತಿ ಕೋರುವವರು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.
- ii) ಪ್ರವರ್ಗ–1 ಅಭ್ಯರ್ಥಿಗಳು ವಯೋಮಿತಿ ವಿನಾಯತಿ ಕೋರುವವರು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.
- iii) ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಹಾಗೂ ಪ್ರವರ್ಗ–3ಬಿ ಅಭ್ಯರ್ಥಿಗಳು ವಯೋಮಿತಿ ವಿನಾಯತಿ ಕೋರುವವರು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.
- iv) ಮಾಜಿ ಸೈನಿಕರು ಸಕ್ಷಮ ಪ್ರಾಧಿಕಾರದಿಂದ ನೀಡುವ ಪ್ರಮಾಣ ಪತ್ರ.

**10) ನೇಮಕಾತಿಗೆ ಅನರ್ಹತೆಗಳು :**

- i) ಭಾರತ ಪ್ರಜೆಯಲ್ಲದಿದ್ದರೆ.
- ii) ನ್ಯಾಯಾಲಯದಲ್ಲಿ ಕ್ರಿಮಿನಲ್ ಅಪರಾಧಗಳಿಗಾಗಿ ಶಿಕ್ಷೆ ಹೊಂದಿದ್ದರೆ.
- iii) ಬ್ಯಾಂಕಿನ ಸದಸ್ಯತ್ವ ಪಡೆದ ವ್ಯಕ್ತಿಯಾಗಿದ್ದರೆ.
- iv) ಭಾರತ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಶಾಸನಬದ್ಧ ನಿಗಮದ ಅಥವಾ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸ್ವಾಮಿತ್ವದ ಸಾರ್ವಜನಿಕ ಉದ್ಯಮಗಳ ಅಥವಾ ವಾಣಿಜ್ಯ/ಸಹಕಾರ ಉದ್ಯಮಗಳ ಅಥವಾ ಸ್ಥಳೀಯ ಸಂಸ್ಥೆಗಳ ಅಥವಾ ಸಹಕಾರ ಸಂಘಗಳ ಅಥವಾ ಬೇರಾವುದೇ ಸಂಸ್ಥೆಯ ನೌಕರನಾಗಿದ್ದು ಅವುಗಳ ಸೇವೆಯಿಂದ ವಜಾ ಮಾಡಲ್ಪಟ್ಟಿದ್ದರೆ.
- v) ಸಕ್ಷಮ ನ್ಯಾಯಾಲಯದಿಂದ ದಿವಾಳಿಯೆಂದು ಘೋಷಿಸಲ್ಪಟ್ಟ ವ್ಯಕ್ತಿ ಅಥವಾ ಅನನ್ಯುಕ್ತ ದಿವಾಳಿ ಆಗಿದ್ದರೆ.
- vi) ಮಾನಸಿಕ ಅಸ್ವಸ್ಥತೆ/ಖಿನ್ನತೆಗೆ ಒಳಗಾಗಿದ್ದರೆ.
- vii) ಜೀವಂತ ಪತಿ ಅಥವಾ ಪತ್ನಿಯನ್ನು ಹೊಂದಿರುವ ವ್ಯಕ್ತಿಯೊಂದಿಗೆ ವಿವಾಹ ಮಾಡಿಕೊಂಡಿದ್ದರೆ ಅಥವಾ ವಿವಾಹ ಒಪ್ಪಂದ ಮಾಡಿಕೊಂಡಿದ್ದರೆ.
- viii) ಕಾನೂನುಬಾಹೀರ ನಿಕಾಯ ( Unlawfull Body ) ಅಥವಾ ಸಂಸ್ಥೆಯೊಂದಿಗೆ ಯಾವುದೇ ರೀತಿಯ ಸಂಪರ್ಕ ಹೊಂದಿದ್ದರೆ ಅಥವಾ ಸದಸ್ಯನಾಗಿದ್ದರೆ ಅಥವಾ ಅಂತಹ ಸಂಸ್ಥೆ/ನಿಕಾಯದ ಯಾವುದೇ ಚಟುವಟಿಕೆಯಲ್ಲಿ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೆ ಅಥವಾ ಸಂಪರ್ಕ ಹೊಂದಿದ್ದರೆ.
- ix) ಭಾರತ ಸಂವಿಧಾನ ಮೌಲ್ಯಗಳ ಸರ್ವೋಚ್ಚತೆಗೆ ಬದ್ಧನಾಗಿರದೆ ಸಂವಿಧಾನವನ್ನು ಬುಡಮೇಲು ಮಾಡುವ ಗುರಿ ಹೊಂದಿದ್ದರೆ.
- x) ಭಾರತದ ಸಾರ್ವಭೌಮತ್ವ ಮತ್ತು ಅಖಂಡತೆ, ದೇಶದ ಭದ್ರತೆ, ರಾಜ್ಯದ ಭದ್ರತೆ, ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರುವಂತಹ/ಭಂಗಮಾಡುವಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದರೆ.

For, THE JAMKHANDI URBAN CO-OP BANK LTD., JAMKHANDI.

GENERAL MANAGER

The Jamkhandi Urban Co-operative Bank Ltd. Jamkhandi

xi) ದೇಶದ/ರಾಜ್ಯದ ವಿವಿಧ ವರ್ಗದ ಜನತೆಯ ನಡುವೆ ಧರ್ಮ, ಜನಾಂಗ, ಜಾತಿ, ಭಾಷೆ, ಕೋಮು ಆಧಾರದ ಮೇಲೆ ಶತೃತ್ವ ಅಥವಾ ದ್ವೇಷದ ಭಾವನೆಗಳಿಗೆ ಪ್ರಚೋದಿಸುವ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದರೆ.

xii) ಕೇಂದ್ರ ಅಥವಾ ಯಾವುದೇ ರಾಜ್ಯದ ಲೋಕಸೇವಾ ಆಯೋಗ ಅಥವಾ ಸ್ವಾಯತ್ತ/ನೇಮಕಾತಿ ಸಮಿತಿಗಳು ನಡೆಸುವ ಆಯ್ಕೆ ಅಥವಾ ಪರೀಕ್ಷೆಯಲ್ಲಿ ಪಾಲ್ಗೊಳ್ಳಲು ಖಾಯಂ ಆಗಿ ಬಹಿಷ್ಕೃತನಾಗಿದ್ದರೆ ಅಥವಾ ಅನರ್ಹತೆ ಹೊಂದಿದ್ದರೆ.

xiii) ನೈತಿಕ ಅಧಃಪತನವನ್ನು ಒಳಗೊಂಡ ಯಾವುದೇ ಅಪರಾಧಕ್ಕಾಗಿ ಅಪರಾಧಿಯೆಂದು ಸಿದ್ದದೋಷಿಯಾಗಿದ್ದರೆ ಅಥವಾ ನಿರ್ಣೀತವಾಗಿದ್ದರೆ.

xiv) ವೈದ್ಯಕೀಯವಾಗಿ ಅನರ್ಹನೆಂದು ಪರಿಗಣಿಸಲಾಗಿದ್ದರೆ/ಪರಿಗಣಿಸಲಾದರೆ.

xv) ಯಾವುದೇ ಅಭ್ಯರ್ಥಿಯು ಬ್ಯಾಂಕಿನ ಸೇವೆಗಳಿಗೆ ಅರ್ಜಿ ಹಾಕಲು ಮತ್ತು ನೇಮಕಾತಿ ಪಡೆಯಲು ಹಾಗೂ ಬ್ಯಾಂಕಿನ ಯಾವುದೇ ಉದ್ಯೋಗಿಯು ಸೇವೆಯಲ್ಲಿ ಮುಂದುವರೆಯಲು, ಮೇಲಿನ ಅನರ್ಹತೆಗಳನ್ನು ಹೊಂದಿರತಕ್ಕದ್ದಲ್ಲ. ಈ ನಿಬಂಧನೆಗಳಲ್ಲಿ ಯುಕ್ತವಾದ ಯಾವುದೇ ಅನರ್ಹತೆಗೆ ಒಳಗಾಗಿರುವುದು ಕಂಡುಬಂದಲ್ಲಿ/ಸಾಬೀತಾದಲ್ಲಿ, ಅಂಥ ವ್ಯಕ್ತಿಯನ್ನು ತಕ್ಷಣದಿಂದ ಬ್ಯಾಂಕಿನ ಸೇವೆಯಿಂದ ತೆಗೆದುಹಾಕುವ ಮತ್ತು ಆ ಬಗ್ಗೆ ಕ್ರಿಮಿನಲ್ ಮೊಕದ್ದಮೆ ಹೂಡುವ ಅಧಿಕಾರ ಬ್ಯಾಂಕಿಗೆ ಇರುತ್ತದೆ.

**11) <u>ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ :</u>**

i) ಬ್ಯಾಂಕಿನ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಬ್ಯಾಂಕಿನ ಅನುಮೋದಿತ ಉಪವಿಧಿಗಳ ಸೇವಾ ನಿಯಮಗಳು ಹಾಗೂ ವೃಂಧ ಮತ್ತು ನೇಮಕಾತಿ ನಿಯಮಗಳು ಅನ್ವಯಿಸುತ್ತವೆ.

ii) ಬ್ಯಾಂಕಿನ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿದ ವೇತನ ಶ್ರೇಣಿಯಲ್ಲಿ ಸೇವಾ ಸೌಲಭ್ಯವನ್ನು ಪಡೆಯಲು ಮಾತ್ರ ಅರ್ಹರಾಗಿರುತ್ತಾರೆ.

iii) ಆಯ್ಕೆಯಾಗುವ ಅಭ್ಯರ್ಥಿಗಳು ನಿಯೋಜಿಸಿದ ಬ್ಯಾಂಕಿನ ಕೇಂದ್ರ ಕಛೇರಿ ಅಥವಾ ಯಾವುದೇ ಶಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರಬೇಕು.

iv) ಬ್ಯಾಂಕಿನ ಹಿತದೃಷ್ಟಿಯಿಂದ ಬ್ಯಾಂಕಿನ ಕಾರ್ಯವ್ಯಾಪ್ತಿಯಲ್ಲಿರುವ ಯಾವುದೇ ಸ್ಥಳಗಳಿಗೂ ಸಹ ಅಭ್ಯರ್ಥಿಗಳನ್ನು ನಿಯೋಜಿಸಬಹುದಾದ ಹಕ್ಕನ್ನು ಬ್ಯಾಂಕು ಹೊಂದಿರುತ್ತದೆ.

v) ಅಭ್ಯರ್ಥಿಗಳ ಆಯ್ಕೆಯ ನಂತರ ಅರ್ಜಿಯ ಜೊತೆ ಸಲ್ಲಿಸಿರುವ ವಿದ್ಯಾರ್ಹತೆ, ಜನ್ಮ ದಿನಾಂಕ ಮತ್ತು ಇತರೆ ದಾಖಲೆಗಳನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ಶಾಲಾ/ಕಾಲೇಜು/ವಿಶ್ವವಿದ್ಯಾನಿಲಯಗಳಿಂದ ನೈಜತೆಯ ಬಗ್ಗೆ ದೃಢೀಕರಿಸಿಕೊಳ್ಳುವ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ. ಸದರಿ ದಾಖಲೆಗಳ ಪರಿಶೀಲನೆಯಲ್ಲಿ ಯಾವುದಾದರು ನ್ಯೂನ್ಯತೆ/ಸುಳ್ಳು/ನಕಲು/ದೋಷಪೂರಿತ ಅಂಶ ಎಂದು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೇ ಅಂತಹವರ ನೇಮಕಾತಿಯನ್ನು ರದ್ದುಪಡಿಸುವ/ಸೇವೆಯಿಂದ ವಜಾಗೊಳಿಸುವ ಹಾಗೂ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

**12) <u>ದುರ್ನಡತೆ :</u>**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಇಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಯ ಸಂದರ್ಭದಲ್ಲಿ ಅಥವಾ ನೇಮಕಾತಿಯ ನಂತರವೂ ಖಾಯಂ ಆಗಿ ಡಿಬಾರ್ ಮಾಡಲಾಗುವದು.

**13) <u>ಇತರೆ ನಿಯಮಗಳು :</u>**

i) ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ APPLY ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಅರ್ಜಿಯನ್ನು ಭರ್ತಿ ಮಾಡಿದ ನಂತರ CONTINUE TO UPLOAD THE DOCUMENTS ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು ಎಲ್ಲಾ ವಿವರಗಳು ಸರಿಯಾಗಿ ಇರುತ್ತವೆ ಎಂದು ಖಚಿತ ಪಡಿಸಿಕೊಂಡ ನಂತರ ಗುಂಡಿಯನ್ನು ಒತ್ತಿ ಮುಂದುವರೆಯಿರಿ.

ii) ನಂತರ ಬರುವ ದಾಖಲಾತಿ ಅಪ್‌ಲೋಡ್ ಫಾರ್ಮನಲ್ಲಿ ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾ ಅನುಭವ, ಮಾಜಿ ಸೈನಿಕ ಪ್ರಮಾಣ ಪತ್ರಗಳನ್ನು ದೃಢೀಕರಿಸಿ ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

For, THE JAMKHANDI URBAN CO-OP
BANK LTD., JAMKHANDI.

GENERAL MANAGER

iii) ಮೊಬೈಲ್, ಕ್ಯಾಮರಾ ಸಹಾಯದಿಂದ ಸೆರೆ ಹಿಡಿದ/ಸ್ಪಷ್ಟತೆ ಇಲ್ಲದಿರುವ ದಾಖಲಾತಿಗಳನ್ನು ಅಪ್‌ಲೋಡ್ ಮಾಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವದು.

iv) ಸೇವಾ ಅನುಭವದ ಪ್ರಮಾಣಪತ್ರ ಸಲ್ಲಿಸುವವರು ಆಯಾ ಸಂಸ್ಥೆಯಿಂದ ಪಡೆದ ಪ್ರಮಾಣ ಪತ್ರವನ್ನು ಸ್ವಹಸ್ತಾಕ್ಷರದಿಂದ ದೃಢೀಕರಿಸಿ ಅಪ್‌ಲೋಡ್ ಮಾಡತಕ್ಕದ್ದು.

v) ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಪಡೆಯಲು ಡೌನ್‌ಲೋಡ್ ಗುಂಡಿಯನ್ನು ಒತ್ತಿ ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು ಬ್ಯಾಂಕು ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರಪಡಿಸತಕ್ಕದ್ದು.

vi) ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ಕಿರಿಯ ಸಹಾಯಕರ ಹುದ್ದೆಗೆ ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿಯನ್ನು ಹೊಂದಿದ ಹಾಗೂ ಸೇವಾ ಅನುಭವ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವದು. ಅದರಂತೆ ಗಣಕಯಂತ್ರ ನಿರ್ವಾಹಕರ ಹುದ್ದೆಗೆ ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಯಾವುದೇ ತಾಂತ್ರಿಕ ವಿಶ್ವವಿದ್ಯಾನಿಲಯದಿಂದ ಬ್ಯಾಚುಲರ್ ಆಫ್ ಇಂಜಿನೀಯರಿಂಗ್ Computer Science/ Information Science/ Electronic and Communication ಪದವಿಯನ್ನು ಹೊಂದಿದ ಹಾಗೂ ಸೇವಾ ಅನುಭವವನ್ನು ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವದು. ಇನ್ನುಳಿದ ಎಲ್ಲಾ ಹುದ್ದೆಗಳಿಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೇ ಯಾವುದೇ ಸಮನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.

vii) ಅರ್ಜಿಯಲ್ಲಿ ನಮೂದಿಸಿರುವ ಅಂಕ ಪಟ್ಟಿಗಳು/ಇತರೇ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡು ಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

viii) ಆಯ್ಕೆಯಾದ ನಂತರ ಅಭ್ಯರ್ಥಿಗಳ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ವಿಶ್ವ ವಿದ್ಯಾನಿಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

ix) ಅಗತ್ಯ ದಾಖಲಾತಿಗಳ ಸೈಜು, ಗಾತ್ರ ಇತ್ಯಾದಿಗಳು ಅಪ್‌ಲೋಡ್ ಮಾಡುವ ಸಂದರ್ಭದಲ್ಲಿ ಕಂಪ್ಯೂಟರ ಪರದೆಯಲ್ಲಿ ಬರುವ ಗಾತ್ರಕ್ಕನುಗುಣವಾಗಿ ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡತಕ್ಕದ್ದು.

x) ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿಯಾದ ಅಭ್ಯರ್ಥಿಗಳು ಸಂಬಂಧಪಟ್ಟ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಂದ ನಡತೆ ಪ್ರಮಾಣವನ್ನು ಕಡ್ಡಾಯವಾಗಿ ಸಲ್ಲಿಸುವದು.

xi) ನೇಮಕಾತಿ ಪ್ರಕ್ರಿಯೆಯು ಕರ್ನಾಟಕ ಸರ್ಕಾರವು ಕಾಲಕಾಲಕ್ಕೆ ನೀಡುವ ನಿರ್ದೇಶನಗಳು ಹಾಗೂ ಆದೇಶಕ್ಕೆ ಒಳಪಟ್ಟಿರುತ್ತದೆ.

xii) ನೇಮಕಾತಿಯನ್ನು ಯಾವುದೇ ಕಾರಣವನ್ನು ನೀಡದೇ ಮುಂದೂಡುವ, ರದ್ದುಪಡಿಸುವ ಹಾಗೂ ನಿಬಂಧನೆಗಳನ್ನು ಬದಲಾಯಿಸುವ ಸಂಪೂರ್ಣ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

xiii) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷದ ಅವಧಿಯ ಪರಿಕ್ಷಾರ್ಥ ಸೇವೆಯಲ್ಲಿ ಇರಬೇಕಾಗುವದು ಮತ್ತು ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕು ಸೂಚಿಸಲ್ಪಟ್ಟಂತಹ ಭದ್ರತೆಯೊಂದಿಗೆ ನಿಯೋಜಿಸಿದ ಶಾಖೆಯಲ್ಲಿ ಕಾರ್ಯನಿರ್ವಹಿಸಬೇಕು ಹಾಗೂ ಅಭ್ಯರ್ಥಿಯ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಅಂತವರ ಸೇವೆಯನ್ನು ಮಾತ್ರ ಖಾಯಂಗೊಳಿಸಲಾಗುವದು.

xiv) ಆಯ್ಕೆಯಾದ ಅಭ್ಯರ್ಥಿಗಳು ಬ್ಯಾಂಕಿನ ನಿಯಮಾನುಸಾರ ಮತ್ತು ಕರ್ನಾಟಕ ಕಾಯ್ದೆ ವ ನಿಯಮಗಳಿಗೊಳಪಟ್ಟು ಕಾರ್ಯನಿರ್ವಹಿಸಬೇಕು.

xv) ಖೊಟ್ಟಿ ಮಾಹಿತಿ/ದಾಖಲಾತಿಗಳ ಸಲ್ಲಿಕೆಯು ಶಿಕ್ಷಾರ್ಹ ಅಪರಾಧವಾಗಿರುತ್ತದೆ.

xvi) ಲಿಖಿತ ಪರೀಕ್ಷೆಯ ಪ್ರವೇಶ ಪತ್ರವನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನಲೋಡ್ ಮಾಡಿಕೊಂಡು ಅರ್ಹ ಅಭ್ಯರ್ಥಿ ಲಿಖಿತ ಪರೀಕ್ಷೆಯಲ್ಲಿ ಹಾಜರಪಡಿಸತಕ್ಕದ್ದು ಇದಕ್ಕೆ ತಪ್ಪಿದಲ್ಲಿ ಬ್ಯಾಂಕು ಹೊಣೆಗಾರ ಇರುವದಿಲ್ಲ.

xvii) ಒಂದು ಮೊಬೈಲ ನಂಬರನ್ನು ರಜಿಸ್ಟರ ಮಾಡಿ ಎಲ್ಲಾ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದು.

**14) ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ಗಮನಿಸಬೇಕಾದ ಅಂಶಗಳು :**

i) Download and Read the Job Notification

ii) Click on Apply Button for specific job

iii) Provide your mobile for Registration & Click on to get OTP option.

iv) Enter OTP number recived in your Mobile.

v) After Entering OTP number click on submit option.

vi) Application form is open.

vii) Fillup the Basic details of the candidates.

For, THE JAMKHANDI URBAN CO-OP BANK LTD., JAMKHANDI.

GENERAL MANAGER

viii) In Basic Details : soft copy of candidate photo & Signature in JPG or PNG format Size should be 512 KB

ix) Fillup the Address details of the candidates.

x) In Address details : upload the soft copy of candidates aadhar card. Its size should be 512 KB

xi) Enter Addition Details : Enter caste certificate RD No & upload the soft copy of Caste Certificate.

xii) Enter SSC/SSLC course Details : upload soft copy of SSC/SSLC marks card. Its size should be 512 KB.

xiii) Enter Pre University Course Details ( PUC/ITI/Diploma ) : upload soft copy of PUC/ITI/Diploma marks card. Its size should be 512 KB

xiv) Enter Degree Course Details : upload soft copies of all semesters/year wise marks card. Its size should be 512 KB per marks card.

xv) After Entering and uploading the above details. If any changes you will edit the information and change it.

xvi) Enter Additional Qualification details if any ? : upload soft copy of all semesters marks card copies.

xvii) Enter Experience Certificate details : upload the soft copy of Experience Certificate. Its size should be 512 KB.

xviii) As final step, you have to proceed to pay and Make payment on Phonepay payment Gateway

xix) On payment Successfuly, You can download the Payment Receipt.

xx) Keep your downloaded Application and Payment Receipt for future reference.

ಸ್ಥಳ : ಜಮಖಂಡಿ

ದಿನಾಂಕ : 26/08/2025

The Jamkhandi Urban Co-operative Bank Ltd. Jamkhandi

ಸದಸ್ಯ ಕಾರ್ಯದರ್ಶಿ
ಸಿಬ್ಬಂದಿ ನೇಮಕಾತಿ ಸಮಿತಿ ಹಾಗೂ
ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ದಿ ಜಮಖಂಡಿ ಅರ್ಬನ್ ಕೋ-ಆಪ್ ಬ್ಯಾಂಕ ಲಿ.,
ಜಮಖಂಡಿ